ಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟನಲ್ಲಿ ಹಾಜರು ಇರಬೇಕೆಂದು ಇದರಿಂದ ತಿಳಿಯಪಡಿಸಿದೆ.

1887ನೇ ಯಿಸವಿ ಸೆಪ್ಟಂಬರು ತಿಂಗಳು 24ನೇ ತಾರೀಖಿನಲ್ಲಿ ಕೋರ್ಟು ಮೊಹರಿನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಯಸ್. ಹೇಮಾಜಿರಾವ್,
ಡಿಸ್ಟ್ರಿಕ್ಟು ಜಡ್ಜ್.

ಮೈಸೂರು ಡಿಸ್ಟ್ರಿಕ್ಟು ಸಬ್ ಜಡ್ಜ್‌ರ್‌ಯವರ ಕೋರ್ಟ್‌ನಲ್ಲಿ.

ದಿವಾಳೀಯಾದ ಡಿಕ್ರೀ ದೇಣೇದಾರ ಮೈಸೂರಲ್ಲಿರುವ ಸವಾರ್ ಇಲಾಖಾ ಪೇಷ್ಕಾರ್ ಮಂಡ್ಲಗಿರೀ ಕೃಷ್ಣರಾಯನ ವಿಷಯದಲ್ಲಿ—

ಸ್ ಸ್ 1887ನೇ ಇಸವಿ ದಿವಾಳೀ ಕೇಸ್ ನಂಬರ್ 142.

ಹುಕ್ಕುಂ.

ಮೇಲ್ಕಂಡ ಕೃಷ್ಣರಾಯನು ನಿರ್ಬಂಧದಿಂದ ಖುಲಾಸೇಯಾಗಬೇಕೆಂದು ಕೊಟ್ಟ ಅರ್ಜೀ ಅಂಶವು ಈ ಕೋರ್ಟು ರೂಬರೂ ಅರ್ಜೀದಾರನಾದ ಕೃಷ್ಣರಾಯನ ಪರವಾಗಿ ಫಸ್ಟ್ ಗ್ರೇಡ್ ಪ್ಲೀಡರ್ ನಾರಾಯಣರಾಯರನ್ನು ಮತ್ತು ಸದರೀಯವನ ಲೇಣೇದಾರ್‌ರಾದ 5ನೇ ಗೋಪಾಲಕಟ್ಟಿ ಖುದ್ದು ಹಾಜರು 14ನೇ ಕೃಷ್ಣಾಚಾರೀ ಕಡೇ ಫಸ್ಟ್‌ಗ್ರೇಡ್ ಪ್ಲೀಡರ್ ವೆಂಕೋಬರಾಯರು ಹಾಜರು ಇವರಿಗೂ ದರ್ಯಾಫ್ತೀ ಮಾಡಲ್ಪಟ್ಟಿತು.

ಈ ಕೆಳಗೆ ನಮೂದು ಮಾಡಲ್ಪಡುವ ಲೇಣೇದಾರ್‌ರು ತಮಗೆ ಈ ದರ್ಯಾಫ್ತೀ ನೋಟೀಸ್ ಜಾರೀಯಾಗಿದ್ದಾಗ್ಯೂ ಖುದ್ದಾಗಿಯಾಗಲಿ ಅಥವಾ ಲಾಯರ್ ಮೂಲಕವಾಗಿಯಾಗಲಿ ಹಾಜರಾಗುವದಕ್ಕೆ ತಪ್ಪಿಹೋದರು, ಯಾರಂದರೆ—1ನೇ ವಡೀಸ್ವಾಮಿರಾಯಚಾರಿ 2ನೇ ಸುಪ ತಕುಮೂರೀ ಬ್ಯಾಂಕ್ 3ನೇ ಖಾಶಿಂಸಾಬ್ 4ನೇ ಬುಡ್ಣಾಸಾಬಿ 6ನೇ ಮೈಸೂರು ಬ್ಯಾಂಕ್ 7ನೇ ಭಾಗೀರಥಿಬಾಯಿ 8ನೇ ಬಸಪ್ಪ 9ನೇ ಈತಮ್ಮ 10ನೇ ರಂಗಪ್ಪ 11ನೇ ಗೋವಿಂದಭೀಮಾಜಿ 12ನೇ ಮಲ್ಲಕಟ್ಟಿ 13ನೇ ಆಲಪ್ಪ 15ನೇ ಶೇಷಗಿರಿರಾವ್ 16ನೇ ದೇವಾಜೀ ಜೋ ಲಾಜೀ ತಂದೇ ನವಲಾಜಿ 17ನೇ ರಂಗಪ್ಪ.

ಸಿವಿಲ್ ಪ್ರೊಸಿಜ್ಯೂರ್ ಕೋಡಿನ 20ನೇ ಅಧ್ಯಾಯದ ನಿರೂಪಣೆಗಳ ಫಲವನ್ನು ಸದರೀ ಪೇಷ್ಕಾರ್ ಕೃಷ್ಣರಾಯನು ಹೊಂದುವದಕ್ಕೆ ಹಕ್ಕುದಾರನಾಗುವದರ ಮೂಲಕ ದಿವಾಳೀಯಾದವನೆಂದು ತೀರ್ಮಾನಿಸಲ್ಪಟ್ಟಿರುತ್ತದೆಯಾಗಿ ಸದರೀ ದಿವಾಳೀಯಾದವನ್ನ ನಿರ್ಬಂಧದಿಂದ ವಿಮೋಚನೇ ಮಾಡಿರುವದಲ್ಲದೇ ಇದಕ್ಕೆ ಲಗ್ಗತ್ತಾಗಿರುವ ಪಟ್ಟಿಯಲ್ಲಿ ಕಂಡ ಯಾವ ಸಾಲಕ್ಕೂ ಸ್ತರವಾಗಿಯಾಗಲಿ ದಸ್ತಗಿರೀ ಮಾಡಲ್ಪಟ್ಟುನಿರ್ಬಂಧಸಡುವ ಜವಾಬ್‌ದಾರಿಯಿಂದ ಸಹ ಅವನ್ನ ನಿಖಾಲಸ್ ಮಾಡಲಾಗಿರುತ್ತೆ ಯೆಂಬು ಇದರಿಂದ ಹುಕ್ಕುಂ ಮಾಡಲ್ಪಟ್ಟಿರುತ್ತೆ.

ಸ್ ಸ್ 1887ನೇ ಇಸವಿ ಆಗಸ್ಟು 31ನೇ ತಾರೀಖಿನಲ್ಲಿ ಈ ಕೋರ್ಟು ಮೊಹರ್ ನಮ್ಮ ಸಮ್ಮತಿನಿಸಿ ಕೊಡಲ್ಪಟ್ಟಿತು.

ಸಾಲದಪಟ್ಟಿ.

ನಂಬರ್.	ಲೇಣೇದಾರ್‌ರು ಅಥವಾ ದಾವಾದಾರ್‌ರ ಹೆಸರು ಮತ್ತು ವಿವರ ಮತ್ತು ಹಾಲೀ ತಿಳಿಯಬಂದ ಅವರುಗಳ ವಾಸಸ್ಥಳ.	ಹೊಬಳಿಗಳು.			ಯಾವಾಗ ಪೇಷ್ಕಾರ್ ಹೊಂದಿದ್ದು.	ದೇಣೆಯ ಸ್ವಭಾವ ಮತ್ತು ಅದರ ಪ್ರತಿಫಲ ಮತ್ತು ಗಿರ್ವೀ ಯೇ ನಾದರೂ ಇದ್ದರೆ.	ಷರಾ.
1	ಶಿವಮೊಗ್ಗೆಲಿರುವ ವಡೀಸ್ವಾಮಿರಾಯಾಚಾರಿ ..	89	3	4	..	ಡಿಕ್ರೀ ಬಾಬತು	
12	ಮೈಸೂರಲ್ಲಿರುವ ಮಲ್ಲಕಟ್ಟಿ ..	44	0	8	..	ಡಿಟೋ	
13	ಡಿಟೋ ಕುರ್ದೂಬಾನ ಮಗ ಆಲಪ್ಪ ..	33	8	6	..	ಡಿಟೋ	
14	ಹೊಳೇನರಸೀಪುರದ ಕೃಷ್ಣಾಚಾರಿ ..	212	0	0	..	ಡಿಟೋ	
15	ಶಿವಮೊಗ್ಗೆಯಲ್ಲಿರುವ ತಿಮ್ಮಯ್ಯ ಘಾತಿ ವಾರಸ್ದಾರ್ ಶೇಷಗಿರಿರಾವು ..	251	0	0	..	ಡಿಟೋ	
16	ಡಿಟೋ ವ್ರು ದೇವಾಜೀ ಜೋಲಾಜಿ ..	350	0	0	..	ಡಿಟೋ	
17	ಡಿಟೋ ರಂಗಪ್ಪ ..	30	0	6	..	ಡಿಟೋ	
		1019	13	0			

ದಿವಾಳೀಯೂದ ಡಿಕ್ರೀ ದೇಣೇದಾರ ಹಾಸನದಲ್ಲಿರುವ ನಾಯಿಕ ಮಹಮ್ಮದ್ ಯೂಸುಫನ ವಿಷಯದಲ್ಲಿ—

ಸ್ಯ 1887ನೇ ಇಸವಿ ದಿವಾಳೀ ಕೇಸ್ ನಂಬರ್ 169.

ಹುಕ್ಕುಂ.

ಮೇಲ್ಕಂಡ ಮಹಮ್ಮದ್ ಯೂಸುಫನು ನಿರ್ಬಂಧದಿಂದ ಖುಲಾಸೇಯಾಗಬೇಕೆಂದು ಕೊಟ್ಟ ಅರ್ಜೀ ಅಂಶವು ಈ ಕೋರ್ಟು ರೂ ಬರೂ ಅರ್ಜೀದಾರನಾದ ಮಹಮ್ಮದ್ ಯೂಸಫನ ಪರವಾಗಿ ಫಸ್ಟ್ ಗ್ರೇಡ್ ಪ್ಲೀಡರ್ ಯಲ್. ನರಸಿಂಗರಾಯರನ್ನು ಮತ್ತು ಸದರೀಯವನ ಲೇಣೇದಾರ್ರಾದವರಿಗೂ ದರ್ಯಾಫ್ತೀ ಮಾಡಲ್ಪಟ್ಟಿತು.

ಈ ಕೆಳಗೆ ನಮೂದು ಮಾಡಲ್ಪಡುವ ಲೇಣೇದಾರು ತಮಗೆ ಈ ದರ್ಯಾಫ್ತೀ ನೋಟೀಸ್ ಜಾರೀಯಾಗಿದ್ದಾಗ್ಯೂ ಖುದ್ದಾಗಿಯಾಗಲಿ ಅಥವಾ ಲಾಯರ್ ಮೂಲಕವಾಗಿಯಾಗಲಿ ಹಾಜರಾಗುವದಕ್ಕೆ ತಪ್ಪಿಹೋದರು, ಯಾರಂದರೆ.--1 ಖಾದರಬೀ ಮೈನರ್‌ಗಾರ್ಡಿಯರ್ಷ್ ಸೈದಲ್ಲೀಸಾಬಿ.

ಸಿವಿಲ್ ಪ್ರೊಸಿಜ್ಯೂರ್ ಕೋಡಿನ 20ನೇ ಅಧ್ಯಾಯದ ನಿರೂಪಣೆಗಳ ಫಲವನ್ನು ಸದರೀ ಮಹಮ್ಮದ್ ಯೂಸುಫನು ಹೊಂದುವದಕ್ಕೆ ಹಕ್ಕುದಾರನಾಗುವದರ ಮೂಲಕ ದಿವಾಳೀಯಾದವನೆಂದು ತೀರ್ಮಾನಿಸಲ್ಪಟ್ಟಿರುತ್ತದೆಯಾಗಿ, ಸದರೀ ದಿವಾಳೀಯಾದವನ್ನ ನಿರ್ಬಂಧದಿಂದ ವಿಮೋಚನೇ ಮಾಡಿರುವದಲ್ಲದೇ ಇದಕ್ಕೆ ಲಗ್ನತ್ತಾಗಿರುವ ಪಟ್ಟಿಯಲ್ಲಿ ಕಂಡ ಯಾವ ಸಾಲಕ್ಕೂ ಸ್ತರವಾಗಿಯಾಗಲೀ ದಸ್ತಗಿರೀ ಮಾಡಲ್ಪಟ್ಟು ನಿರ್ಬಂಧಪಡುವ ಜವಾಬ್‌ದಾರೀಯಿಂದ ಸಹ ಅವನ್ನ ನಿಖಾಲಸ್ ಮಾಡಲಾಗಿರುತ್ತೆಯೆಂದು ಇದರಿಂದ ಹುಕ್ಕುಂ ಮಾಡಲ್ಪಟ್ಟಿರುತ್ತೆ.

ಸ್ಯ 1887ನೇ ಇಸವಿ ಆಗಸ್ಟು 31ನೇ ತಾರೀಖಿನಲ್ಲಿ ಈ ಕೋರ್ಟು ಮೊಹರ್ ನಿಶಿ ನಮ್ಮ ದಸ್ತಖತ್ತೊಡನೇ ಕೊಡಲ್ಪಟ್ಟಿತು.

ಸಾಲದಪಟ್ಟಿ.

ನಂಬರು.	ಲೇಣೇದಾರು ಅಥವಾ ದಾವಾದಾರ್ರ ಹೆಸರು ಮತ್ತು ವಿವರ ಮತ್ತು ಹಾಲೀ ತಿಳಿಯಬಂದ ಅವರುಗಳ ವಾಸಸ್ಥಳ.	ಜೊತೆಲಗು.	ಗೊತ್ತಾಗಿ ಬೇಕೇ ಯಾವಾಗ ಬಾದದ್ದು.	ದೇಣೆಯ ಸ್ವಭಾವ ಮತ್ತು ಅದರ ಪ್ರತಿಫಲ ಮತ್ತು ಗಿರ್ವೀಯೇನಾದರೂ ಇದ್ದರೆ.	ರೂ.
1	ಹಾಸನದಲ್ಲಿರುವ ಖಾದರಬೀ ಮೈನರ್‌ಗಾರ್ಡಿಯರ್ಷ್ ಸೈದಲ್ಲೀಸಾಬ್. ..	115 0 0	..	ಡಿಕರೀ ಬಾಬತು.	

ಸಿ. ಶ್ರೀನಿವಾಸಯ್ಯಂಗಾರ್, ಸಬ್ ಜಡ್ಜ್.

ಗೈರವಿಲಾ ಆದ

ಪೂರಾ ಕರೆನ್ಸೀ ನೋಟಿನ,

ನಂಬರ್.	ಸ್ಟರ್ಲಿಂ.	ಹಕ್ಕುದಾರ್—ಮೈಸೂರು ಕೆಂಪನಂಜಂಮಾಂಬಾ ಅಗ್ರಹಾರದ
ಬಿ. 94—66445	ಕ್ರಯ ರೂ. 100	ಲ್ಲಿರುವ ಯೇಜಂಟ್ ವೆಂಕಟರಾಮಯ್ಯ.

ಗವರ್ಮೆಂಟ್ ತಯಾರೀ ಬಾಬತು ಸಿಂಕೋನಾ ಫೆಬ್ರಿಫ್ಯೂಜ್ ಎಂಬ ಔಷಧ.

ಈ ಔಷಧವು, ಕಿನ್ನೈಗೆ ಬದಲಾಗಿ ಉಪಯೋಗಿಸತಕ್ಕ ಬಹಳ ಯೋಗ್ಯವಾದ ಔಷಧವಾಗಿರುತ್ತೆ. ಜನಗಳಿಗಾಗಿ ವ ಧರ್ಮಾರ್ಥವಾಗಿ ಗವರ್ಮೆಂಟ್ ಆಫೀಸರ್‌ಗಳು ಕೊಂಡು ಕೊಳ್ಳಬಹುದು, ಒಂದು ಸಲಕ್ಕೆ ಇಪ್ಪತ್ತು ಪೌಂಡಗಳು ತೆಗದುಕೊಳ್ಳುವ ಯಾವ ಮನುಷ್ಯನಾದರೂ ಕಲ್ಕತ್ತೆಯಲ್ಲಿ ಬೊಟಾನಿಕಲ್ ಗಾರ್ಡನ್ ಸೂಪರ್‌ಟೆಂಡೆಂಟರ ದೆಕೆಯಿಂದ ಇದರಡಿ ಕಂಡ ದರಗಳ ಪ್ರಕಾರ ನಗದು ಕೊಟ್ಟೇ ಕೊಂಡುಕೊಳ್ಳಬೇಕಾಗಿರುತ್ತೆ. ನಾಲ್ಕು ಔನ್ಸ್ ಔಷಧವುಳ್ಳ ತಗರದ ಡಬ್ಬೀ ಒಂದಕ್ಕೆ ರೂ. 4—8—0; ಎಂಟು ಔನ್ಸ್‌ವುಳ್ಳ ಡಬ್ಬಿಗೆ ರೂ. 8—8—0; ಒಂದು ಪೌಂ ಔಷಧವುಳ್ಳ ಡಬ್ಬಿಗೆ ರೂ. 16—8—0; ಬೊಟಾನಿಕಲ್ ಗಾರ್ಡನ್ ಸೂಪರ್‌ಟೆಂಡೆಂಟರು ಇದರಡಿ ಕಂಡ ದರ ಪ್ರಕಾರ ನಗದಿಗೇನೇ ಸರ್ವಜನಗಳಿಗೂ ಒದಗಿಸ ಬಹುದು; ನಾಲ್ಕು ಔನ್ಸ್‌ವುಳ್ಳ ಡಬ್ಬಿಬಂದಕ್ಕೆ ರೂ. 5—8—0, ಎಂಟು ಔನ್ಸ್‌ವುಳ್ಳ ಡಬ್ಬಿಗೆ ರೂ. 10—8—0, ಒಂದು ಪೌಂವುಳ್ಳ ಡಬ್ಬಿಗೆ 20 ರೂಪಾಯಿ, ಈ ಔಷಧವು ಕಲಕತ್ತೆಯಲ್ಲಿ ಮುಖ್ಯ ಮುಖ್ಯ ಯೂರೋಪಿಯರ್ಷ್ ನೇಟಿವ್ ಮದ್ದಿನಂಗಡಿಯವರಿಂದ ಮಾರಲ್ಪಡುತ್ತೆ. ಸದರೀ ಕಿಮ್ಮತಿನೊಂದಿಗೆ ದರ 4 ವ 8 ಔನ್ಸ್ ತಗರದ ಡಬ್ಬಿಗೆ ಎಂಟು ಆಣೆ ಟಪ್ಪಾಲ್ ಹಾಸಲೂ, ಒಂದು ಪೌಂ ಡಬ್ಬಿಗೆ ಹನ್ನೆರಡು ಆಣೇ ಹಾಸಲೂ ಕೊಡಬೇಕು.

Mysore Government Press, Bangalore.—1887.